**ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಗಾಯತ್ರಿನಗರ ವಾರ್ಡ್-76ರಲ್ಲಿ ದಿನಾಂಕ: 02-01-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ**

***ಸಭಾ ನಡವಳಿಗಳು.***

**ವಾರ್ಡ್ ಸಂಖ್ಯೆ-76 ಗಾಯತ್ರಿನಗರ** **ಸಮಯ ಬೆಳಿಗ್ಗೆ 11:00 ಘಂಟೆಗೆ**

ದಿನಾಂಕ: 02-01-2021 ರಂದು ವಾರ್ಡ್ ಸಂಖ್ಯೆ: 76ರ ಜನವರಿ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ: 76ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ, ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಯಕೊಂಡು ಸಭೆ ನಡೆಸಲು ಕೋರಿದರು.

**ಸಭೆಗೆ ಹಾಜರಿದ್ದವರು :**

| | |
|---|---|
| 1 | ಶ್ರೀ ಚಂದ್ರಶೇಖರ್. ಹೆಚ್.ಆರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್-76ಗಾಯತ್ರಿನಗರ |
| 2 | ಶ್ರೀ ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು, ವಾರ್ಡ್-76ಗಾಯತ್ರಿನಗರ ಹಾಗೂ ಕಾರ್ಯದರ್ಶಿ |
| 3 | ಶ್ರೀ ಕನಕರಾಜು, ಕಂದಾಯ ಪರಿವೀಕ್ಷಕರು |
| 4 | ಶ್ರೀ ಕೆ ಗೋವಿಂದರಾಜು, ಸ್ಯಾನಿಟರಿ ದಫೇದರ್, ಬಿಬಿಎಂಪಿ |
| 5 | ಡಾ॥ ಅಂಜನಾ, ಆರೋಗ್ಯ ಅಧಿಕಾರಿ |
| 6 | ಶ್ರೀ ಆರ್.ಸಂತೋಷ್, ಕೆಲಸ ಪರಿವೀಕ್ಷಕರು |
| 7 | ಶ್ರೀ ಪಿ.ವೆಂಕಟೇಶ್, ಎಲೆಕ್ಟ್ರೀಕಲ್ ಗುತ್ತಿಗೆದಾರರು |
| 8 | ಶ್ರೀ ಮಂಜುನಾಥ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 9 | ಶ್ರೀ ಪ್ರದೀಪ್, ಮೇಲ್ವಿಚಾರಕರು |
| 10 | ಶ್ರೀ ರಂಗನಾಥ್, ಬೆಸ್ಕಾಂ, ಜೆ.ಇ |
| 11 | ಶ್ರೀ ಸಿದ್ದರಾಜು, ಬಿ.ಡಬ್ಲ್ಯೂಎಸ್‌ಎಸ್‌ಬಿ |
| 12 | ಶ್ರೀ ಕೊಂಡಯ್ಯ, ಆರೋಗ್ಯ ಪರಿವೀಕ್ಷಕರು |
| 13 | ಶ್ರೀ ಹರೀಶ್, ಮಾರ್ಷಲ್ |

Scanned with CamScanner

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಶ್ರೀ ಚಂದ್ರಶೇಖರ್.ಹೆಚ್.ಆರ್ ನೋಡಲ್ ಅಧಿಕಾರಿಗಳು ವಾರ್ಡ್-76 ಇವರು ಸಭೆಯನ್ನು ಮುಂದುವರೆಸಲು ಸೂಚಿಸಿದರು.

**ಆರೋಗ್ಯ ಇಲಾಖೆ:**

- ಸಭೆಯಲ್ಲಿ ಹಾಜರಿದ್ದ, ಆರೋಗ್ಯ ಅಧಿಕಾರಿಗಳು ಪ್ರತಿ ದಿನ ಸಾರ್ವಜನಿಕರಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.ಕೋವಿಡ್ ಪರೀಕ್ಷೆಯನ್ನು ನಿರಂತರವಾಗಿ ಮುಂದುವರೆಸಲು ಸೂಚಿಸಲಾಯಿತು.
- ವಾರ್ಡ್‌ನ ಪೌರಕಾರ್ಮಿಕರುಗಳಿಗೆ ಒಂದು ತಿಂಗಳಿಗೊಮ್ಮೆ ಕೋವಿಡ್ ಪರೀಕ್ಷೆ ಟೆಸ್ಟ್ ನಡೆಸಲು ತಿಳಿಸಲಾಯಿತು.
- ಬಿಬಿಎಂಪಿ ಬಾಲಕಿಯರ ಪ್ರೌಢಶಾಲೆ ಮತ್ತು ಕಾಲೇಜು ವಿಧ್ಯಾರ್ಥಿಗಳಿಗೆ ಕೋವಿಡ್ ಪರೀಕ್ಷೆ ನಡೆಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

**ಬಿಡ್ಲ್ಯೂಎಸ್‌ಎಸ್‌ಬಿ ಇಲಾಖೆ:**

- ಸಭೆಯಲ್ಲಿ ಹಾಜರಿದ್ದ ಬಿಡ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳಿಗೆ ರಸ್ತೆಗಳನ್ನು ಕತ್ತರಿಸುವಾಗ ಕಟಿಂಗ್ ಮಶಿನ್‌ನಿಂದ ಕತ್ತರಿಸಲು ಹಾಗೂ ರಿಸ್ಟೋರೇಷನ್ ಮಾಡುವಾಗ ಬೇಕಾದಷ್ಟು ವೆಟ್‌ಮಿಕ್ಸ್‌ನ್ನು ತರಿಸಿಕೊಂಡು ಜನ ಸಾಮಾನ್ಯರಿಗೆ ತೊಂದರೆಯಾಗದಂತೆ ರಸ್ತೆಗಳನ್ನು ರಿಸ್ಟೋರೇಷನ್ ಮಾಡಲು ಹಾಗೂ ಬೇಗ ಕೆಲಸ ನಿರ್ವಹಿಸಲು ಸಭೆಯಲ್ಲಿ ಸೂಚಿಸಲಾಯಿತು.

**ಬೆಸ್ಕಾಂ ವಿಭಾಗ**

- ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳು ಯಾವುದೇ ದೂರುಗಳಿಲ್ಲವೆಂದು ಸಭೆಯಲ್ಲಿ ತಿಳಿಸಿದರು.

**ಕಂದಾಯ ಇಲಾಖೆ**

- ಕಂದಾಯ ಇಲಾಖೆಯ ಕಂದಾಯ ವಸೂಲಿಯನ್ನು ತ್ವರಿತವಾಗಿ ವಸೂಲಿ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.
- 3 ತಿಂಗಳು ಮಾತ್ರ ಬಾಕಿ ಇರುವುದರಿಂದ ಅರಿಯರ್ಸ್ ಬಾಕಿ ಇದ್ದು ವಸೂಲು ಮಾಡುವಂತೆ ತಿಳಿಸಲಾಯಿತು. ಅರಿಯರ್ಸ್ ಕಟ್ಟದೆ ಇರುವವರಿಗೆ ನೋಟಿಸ್ ನೀಡಲಾಗಿದೆ ಎಂದು ಕಂದಾಯ ಪರಿವೀಕ್ಷಕರು ತಿಳಿಸಿದರು.
- ಕಂದಾಯ ಇಲಾಖೆಯವರಿಗೆ ಕಛೇರಿ ಇಲ್ಲವೆಂದು ತಿಳಿಸಿದರು. ರಾಮಮೋಹನಪುರದ ಸೇವಾ ಕೇಂದ್ರದ ಮೊದಲನೇ ಮಹಡಿಯನ್ನು ಬಿಟ್ಟುಕೊಡುವಂತೆ ಸಭೆಯಲ್ಲಿ ತಿಳಿಸಿದರು.

Scanned with CamScanner

**ಮಾಸ್ಕ್**

- ವಾರ್ಡ್‌ನ ಮಾರ್ಷಲ್‌ಗಳು ಕಸವನ್ನು ರಸ್ತೆ ಬದಿಯಲ್ಲಿ ಬಿಸಾಡುತ್ತಿದ್ದವರಿಗೆ ಹಾಗೂ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸುತ್ತಿದ್ದು, ವಾರ್ಡ್‌ನ ಮಾರ್ಷಲ್‌ಗಳಿಗೆ ಸಭೆಯಲ್ಲಿ ಮೆಚ್ಚಿಗೆ ವ್ಯಕ್ತಪಡಿಸಲಾಯಿತು.

**ಬಿಬಿಎಂಪಿ ಬೀದಿದೀಪ ವಿಭಾಗ**

- ಬೀದಿದೀಪ ವಿಭಾಗದ ಅಧಿಕಾರಿಗಳು ಯಾವುದೇ ದೂರುಗಳಿಲ್ಲವೆಂದು ಸಭೆಯಲ್ಲಿ ತಿಳಿಸಿದರು.

**ಬಿಬಿಎಂಪಿ ಕಾಮಗಾರಿ ವಿಭಾಗ**

- ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಕ್ರಮಕೈಗೊಳ್ಳಲು ಸಭೆಯಲ್ಲಿ ಸೂಚಿಸಲಾಯಿತು. ಹಾಗೂ ವಾರ್ಡ್‌ನಲ್ಲಿ (Insensive cleaning) ವಾರ್ಡ್‌ನಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತೀರ್ಮಾನಿಸಲಾಯಿತು.

**ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.**

| | |
|---|---|
| **ಕಾರ್ಯದರ್ಶಿ,** | **ಅಧ್ಯಕ್ಷರು** |
| **ಸಹಾಯಕ ಅಭಿಯಂತರರು, ವಾರ್ಡ್-76** | **ನೋಡಲ್ ಅಧಿಕಾರಿಗಳು, ವಾರ್ಡ್-76** |
| **ಗಾಯತ್ರಿನಗರ, ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ** | **ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ** |

Scanned with CamScanner